ಕರ್ನಾಟಕ ಸರ್ಕಾರ

ದಿನಾಂಕ: 01–11–2017

# ಕನ್ನಡ ಕಲಿಸುವಂತ ವಾತವರಣ ನಿರ್ಮಾಣ ಮಾಡುವುದು ಪ್ರತಿ ಕನ್ನಡಿಗನ ಜವಬ್ಧಾರಿ – ಮುಖ್ಯಮಂತ್ರಿ ಸಿದ್ದರಾಮಯ್ಯ

ಬೆಂಗಳೂರು, ನವೆಂಬರ್ 01:

ಪ್ರಸ್ತುತ ಸನ್ನೀವೇಷದಲ್ಲಿ ಕರ್ನಾಟಕದಲ್ಲಿರುವ ಅನ್ಯಭಾಷಿಕರಿಗೆ ಕನ್ನಡ ಕಲಿಸುವಂತಹ ವಾತಾವರಣವನ್ನು ನಿರ್ಮಾಣ ಮಾಡುವಂತದ್ದು ಪ್ರತಿ ಕನ್ನಡಿಗನ ಜವಬ್ಧಾರಿ, ಪ್ರತಿಯೊಬ್ಬ ಕನ್ನಡಿಗ ಈ ಕುರಿತು ಸಂಕಲ್ಪ ಮಾಡಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕರೆ ನೀಡಿದರು.

ಇಂದು ಸಾರ್ವಜನಿಕ ಶಿಕ್ಷಣ ಇಲಾಖೆ ಕಂಠೀರವ ಕ್ರೀಡಾಂಗಣದಲ್ಲಿ ಹಮ್ಮಿಕೊಂಡಿದ್ದ 62ನೇ ಕರ್ನಾಟಕ ರಾಜ್ಯೋತ್ಸವ ಸಮಾರಂಭ ಮತ್ತು ಮಕ್ಕಳ ಮೇಳ–2017 ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ನಾನು ಯಾವುದೇ ಭಾಷೆಯ ವಿರೋಧಿಯಲ್ಲ, ಕರ್ನಾಟಕದಲ್ಲಿ ವಾಸ ಮಾಡುವ ಪ್ರತಿಯೊಬ್ಬರು ಕೂಡ ಕನ್ನಡವನ್ನು ಕಲಿಯಬೇಕು ಹಾಗೂ ಕನ್ನಡವನ್ನು ಗೌರವಿಸಬೇಕು. ಇಂತಹ ವಾತಾವರಣವನ್ನು ನಿರ್ಮಿಸುವ ಅಗತ್ಯವಿದೆ ಎಂದು ಹೇಳಿದರು.

ಪೋಷಕರಿಗೆ ಇಂಗ್ಲೀಷ್ ಭಾಷೆ ಕುರಿತು ಹೆಚ್ಚಿನ ವ್ಯಾಮೋಹವಿದೆ, ಅದು ಒಳ್ಳೆಯ ಪ್ರವೃತ್ತಿಯಲ್ಲ. ಮಾತೃ ಭಾಷೆಯಲ್ಲಿ ಕಲಿತಾಗ ಮಾತ್ರ ಅರ್ಥ ಮಾಡಿಕೊಳ್ಳುವುದಕ್ಕೂ ಹಾಗೂ ಅಭಿವ್ಯಕ್ತಿ ಪಡಿಸಲಿಕ್ಕೂ ಸುಲಭ. ಮಾತೃ ಭಾಷೆ ಕನ್ನಡದಲ್ಲಿ ಕಲಿತು ಸರ್.ಎಂ.ವಿಶ್ವೇಶ್ವರಯ್ಯ ಅವರು ಜಗತ್ಪ್ರಸಿದ್ಧ ಇಂಜಿನೀಯರ್ ಆದರು, ಕನ್ನಡದಲ್ಲಿ ಕಲಿತ ಸಿ.ಎನ್.ಆರ್.ರಾವ್ ವಿಜ್ಞಾನಿಯಾದರು, ತಾವು ಸಹ ಕನ್ನಡ ಮಾಧ್ಯಮದಲ್ಲಿ ಕಲಿತು ಇಂದು ಮುಖ್ಯಮಂತ್ರಿಗಳಾಗಿದ್ದು ಎಂದು ಉದಾಹರಣೆ ಸಮೇತ ಮಾತನಾಡಿದರು.

ಸುಪ್ರಿಂ ಕೋರ್ಟ್ ಪೋಷಕರಿಗೆ ತಮ್ಮ ಮಕ್ಕಳ ಕಲಿಕಾ ಭಾಷೆಯನ್ನು ಆಯ್ಕೆ ಮಾಡಿಕೊಳ್ಳುವ ಅವಕಾಶ ನೀಡಿ ಆದೇಶ ನೀಡಿದೆ, ಈ ಕುರಿತು ಸಂವಿಧಾನಕ್ಕೆ ತಿದ್ದುಪಡಿ ತರಲು ಹಾಗೂ ಪ್ರಾದೇಶಿಕ ಭಾಷೆಗಳಿಗೆ ಶಿಕ್ಷಣದಲ್ಲಿ ಹೆಚ್ಚಿನ ಮಹತ್ವ ಸಿಗಲು ಪ್ರಧಾನ ಮಂತ್ರಿಗಳಿಗೆ ಈಗಾಗಲೇ ಎರಡು ಪತ್ರಗಳನ್ನು ಬರೆದಿದ್ದು ಮತ್ತೇ ಇನ್ನೊಂದು ಪತ್ರವನ್ನು ಶೀಘ್ರದಲ್ಲಿ ಬರೆಯುತ್ತೇನೆ.

ಸರಕಾರಿ ಪ್ರಾಥಮಿಕ ಶಾಲೆಗಳಿಗೆ ತಮ್ಮ ಮಕ್ಕಳನ್ನು ಸೇರಿಸಲು ಹಿಂಜರಿಯುವ ಪೋಷಕರು ಉನ್ನತ ಶಿಕ್ಷಣಕ್ಕಾಗಿ ಸರಕಾರಿ ಸಂಸ್ಥೆಗಳಲ್ಲಿ ಸೀಟು ಗಿಟ್ಟಿಸಿಕೊಳ್ಳಲು ಆತೊರೆಯುತ್ತಾರೆ. ಇಂದು ಪ್ರತಿ ಮಕ್ಕಳಿಗೂ ಸಮಾನ ಶಿಕ್ಷಣ ಸಿಗಬೇಕು ಎಂಬ ಆಶಯದೊಂದಿಗೆ ಸರ್ಕಾರ ಹತ್ತು ಸಾವಿರ ಶಿಕ್ಷಕರಿಗೆ ಇಂಗ್ಲೀಷ್ ಭಾಷೆಯ ಕುರಿತು ತರಬೇತಿ ಹಾಗೂ ಐವತ್ತು ಸಾವಿರ ಶಿಕ್ಷಕರಿಗೆ ಹೊಸ ಮಾಧರಿ ಶಿಕ್ಷಣ ಕುರಿತು ತರಬೇತಿ ನೀಡಲಾಗುತ್ತಿದೆ.

ಕನ್ನಡದ ಭಾಷೆ 2000ಕ್ಕೂ ಹೆಚ್ಚು ವರ್ಷಗಳ ಇತಿಹಾಸ ಜೊತೆಗೆ ತನ್ನದೇ ಲಿಪಿಯನ್ನು ಹೊಂದಿರುವ ಭಾಷೆ, ನನಗೆ ಕನ್ನಡದ ಬಗ್ಗೆ ಪ್ರೀತಿ, ಅಭಿಮಾನ ಮತ್ತು ಕಾಳಜಿ ಇದೆ ಹಾಗೆಯೇ ನಾನು ಇತರೆ ಭಾಷೆಗಳ ದ್ವೇಷಿಯಲ್ಲ. ಅದಕ್ಕಾಗಿ ಕರ್ನಾಟಕದಲ್ಲಿರುವ ಎಲ್ಲಾ ಶಾಲೆಗಳಲ್ಲಿ ಕೂಡ ಕನ್ನಡ ಒಂದು ಕಡ್ಡಾಯ ಭಾಷೆಯನ್ನಾಗಿ ಕಲಿಸಲು ಆದೇಶ ಹೊರಡಿಸಲಾಗಿದೆ.

ಕನ್ನಡಕ್ಕಾಗಿ, ಕನ್ನಡ ಶಾಲೆಗಳ ಅಭಿವೃದ್ಧಿಗಾಗಿ ಹಲವು ಕಾರ್ಯಕ್ರಮಗಳನ್ನು ಸರ್ಕಾರ ಹಮ್ಮಿಕೊಂಡಿದೆ. ಇತ್ತೀಚಿಗೆ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರು ಖಾಸಗಿ ಶಾಲೆಯೊಂದರಲ್ಲಿ ಕನ್ನಡ ಮಾತನಾಡಿದರೆ ಐದು ನೂರು ರೂ. ದಂಡ ಹಾಕಲಾಗುತ್ತಿದೆ ಎಂದು ತಮ್ಮ ಗಮನಕ್ಕೆ ತಂದಿದ್ದಾರೆ. ಈ ರೀತಿಯ ಶಾಲೆಗಳ ವಿರುದ್ಧ ಕಠಿಣ ಕ್ರಮ ತೆಗೆದುಕೊಳ್ಳಲಾಗುವುದು ಎಂದು ತಿಳಿಸಿದರು.

ಕನ್ನಡ ಕಲಿಸುವ ವಾತಾವರಣ ನಿರ್ಮಾಣಕ್ಕಾಗಿ ಹಾಗೂ ಪೋಷಕರಲ್ಲಿ ಕನ್ನಡದ ಅಭಿಮಾನದ ಜಾಗೃತಿಗಾಗಿ ಸರ್ಕಾರ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಯೋಜಿಸಲಾಗುತ್ತಿದೆ. ಯಾವುದೇ ಕಾರಣಕ್ಕೂ ಸರ್ಕಾರಿ ಶಾಲೆಗಳನ್ನು ಮುಚ್ಚಲು ಬಿಡುವುದಿಲ್ಲ. ಕರ್ನಾಟಕದಲ್ಲಿ ವಾಸಿಸುವ ಪ್ರತಿಯೊಬ್ಬರಿಗೂ ಕನ್ನಡ ರಾಜ್ಯೋತ್ಸವ ಶುಭಾಷಯಗಳು ಎಂದು ಹೇಳಿದರು.

ಈ ಸಮಯದಲ್ಲಿ ಮುಖ್ಯಮಂತ್ರಿಗಳು ಸಾರ್ವಜನಿಕ ಶಿಕ್ಷಣ ಇಲಾಖೆ ಅಂತರಜಾಲದಲ್ಲಿ ನೂತನವಾಗಿ ಆರಂಭಿಸಿರುವ 'ಕನ್ನಡ ಸೌರಭ' ಇ–ಲರ್ನಿಂಗ್ ಉಚಿತ ಡೌನ್‌ಲೋಡ್ ಮಾಡಿಕೊಳ್ಳಬಹುದಾದ ಹಾಗೂ ಕನ್ನಡದಲ್ಲಿರುವ ಕನ್ನಡ ಕಲಿಕೆ ಕಡ್ಡಾಯ ಇ ಕಲಿಕೆ ಸರಳ ಉಪಾಯ ಪೇಜನ್ನು ಉದ್ಘಾಟಿಸಿದರು.

ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ, ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ಔಕಾಫ್ ಸಚಿವ ತನ್ವೀರ್ ಸೇಠ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿ ಕನ್ನಡ ಕುರಿತಂತೆ ಸರ್ಕಾರ ತೆಗೆದುಕೊಂಡಿರುವ ನಿರ್ಧಾರಗಳಲ್ಲಿ ಈ ವರ್ಷ ಅತ್ಯಂತ ಪ್ರಮುಖವಾದದ್ದು. ಕನ್ನಡ ಕಡ್ಡಾಯ ಶಿಕ್ಷಣ ಜಾರಿ, ಕನ್ನಡದ ಭಾವುಟದ ಬಗ್ಗೆ ಸರ್ಕಾರ

ತೋರ್ಪಡಿಸಿದ ಬದ್ಧತೆ ಸೇರಿದಂತೆ ಕರ್ನಾಟಕದಲ್ಲಿ ಕನ್ನಡಕ್ಕಾಗಿ ಸರ್ಕಾರ ಹಲವು ಯೋಜನೆ ಹಾಗೂ ಅಧಿಸೂಚನೆಗಳನ್ನು ಜಾರಿಗೊಳಿಸಿದೆ.

ಸರ್ಕಾರಿ ಶಾಲೆಗಳಲ್ಲಿ ಶಿಕ್ಷಣವನ್ನು ಉತ್ತಮಗೊಳಿಸಲು ಹಾಗೂ ಹೆಚ್ಚಿನ ಮಕ್ಕಳನ್ನು ಆಕರ್ಷಿಸಲು ಹಲವು ಯೋಜನೆಗಳನ್ನು ಸರ್ಕಾರ ಹಮ್ಮಿಕೊಂಡಿದೆ. ದೃಶ್ಯ ಮಾಧ್ಯಮದ ಮೂಲಕ ಕಲಿಕೆಗಾಗಿ ಕ್ರಮ ಕೈಗೊಳ್ಳಲಾಗುತ್ತಿದೆ. ಮಕ್ಕಳಿಗೆ ಈಗಾಗಲೇ ನೀಡುತ್ತಿರುವ ಕೆನೆಭರಿತ ಹಾಲಿನ ಬದಲಾಗಿ ಸುವಾಸನೆ ಭರಿತ ಹಾಲನ್ನು ನೀಡಲು ಇಂದಿನಿಂದ ಮೈಸೂರು ಮತ್ತು ರಾಯಚೂರು ಜಿಲ್ಲೆಗಳಲ್ಲಿ ಪ್ರಾಯೋಗಿಕವಾಗಿ ಯೋಜನೆಯನ್ನು ಆರಂಭಿಸಲಾಗುವುದು.

ಮಕ್ಕಳಿಗೆ ನೀಡುವ ಸಮವಸ್ತ್ರಗಳನ್ನು ರಾಜ್ಯದ ನೇಕಾರರಿಂದ ಖರೀದಿಸಲು ಈಗಾಗಲೇ ಸೂಕ್ತ ಕ್ರಮವನ್ನು ಕೈಗೊಂಡಿದ್ದು, 8000 ನೇಕಾರರಿಂದ ಮುಂದಿನ ಮೂರು ವರ್ಷಗಳಿಗೆ ಮಕ್ಕಳಿಗೆ ಸಮವಸ್ತ್ರ ಖರೀದಿಸಲು ಒಪ್ಪಂದ ಮಾಡಿಕೊಳ್ಳಲು ಸರ್ಕಾರ ಮುಂದಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ನಗರಾಭಿವೃದ್ಧಿ ಮತ್ತು ಹಜ್ ಸಚಿವ ಆರ್. ರೋಷನ್ ಬೇಗ್ ಅವರು ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಬೆಂಗಳೂರು ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವ ಕೆ.ಜೆ.ಜಾರ್ಜ್, ವಿಧಾನಪರಿಷತ್ ಸದಸ್ಯ ಗೋವಿಂದರಾಜು ಹಾಗೂ ಸರ್ಕಾರದ ಪ್ರಧಾನ ಕಾರ್ಯದರ್ಶಿ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆಯ ಡಾ.ಶಾಲಿನಿ ರಜನೀಶ್ ಅವರು ಉಪಸ್ಥಿತರಿದ್ದರು.

**ಕಣ್ಮನ ಸೆಳೆದ ಕನ್ನಡದ ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮಗಳು:**

ವಿವಿಧ ಶಾಲೆಗಳ ಸಾವಿರಾರು ಮಕ್ಕಳು ಇಂದು ಹಮ್ಮಿಕೊಂಡಿದ್ದ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ರಾಷ್ಟ್ರಗೀತೆ, ನಾಡಗೀತೆ, ರೈತಗೀತೆ ಸೇರಿದಂತೆ ಹಲವು ಹಾಡುಗಳನ್ನು ಗುಂಪಾಗಿ ಹಾಡಿದ ವಿವಿಧ ಶಾಲೆಗಳ ಮಕ್ಕಳು ನೆರೆದವರ ಕಣ್ಮನ ಸೆಳೆದರು.

ಒಟ್ಟು 80 ಶಾಲೆಗಳ ಮಕ್ಕಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಪ್ರದರ್ಶಿಸಲಾಯಿತು. ಅದರಲ್ಲಿ ಮುಖ್ಯವಾಗಿ 2000 ಮಕ್ಕಳಿಂದ ಸಾಧರ ಪಡಿಸಿದ 'ಭಾರತೀಯಂ' (ಲಯಬದ್ಧ ಕವಾಯತು) ಕಾರ್ಯಕ್ರಮ ಜನರನ್ನು ಆಕರ್ಷಿಸಿತು. ಪಥ ಸಂಚಲನದಲ್ಲಿ 13 ಶಾಲೆಗಳು ಹಾಗೂ ವಾದ್ಯವೃಂದದಲ್ಲಿ 5 ಶಾಲೆಗಳ ಮಕ್ಕಳಿಗೆ ಅವಕಾಶ ನೀಡಲಾಗಿತ್ತು.

**ಜೈ ಹಿಂದ್ ! ಜೈ ಕರ್ನಾಟಕ !!**